Akashvani: Bangalore
National Bulletin In Kannada
17.10.2025 : 7.35hrs
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

*******

ಮುಖ್ಯಾಂಶಗಳು

೧. ನವದೆಹಲಿಯಲ್ಲಿಂದು ಆದಿ ಕರ್ಮಯೋಗಿ ಅಭಿಯಾನ ಕುರಿತ ರಾಷ್ಟ್ರೀಯ ಸಮಾವೇಶ; ರಾಷ್ಟ್ರಪತಿ ದ್ರೌಪದಿ ಮುರ್ಮು ಭಾಗಿ

೨. ಮೊದಲ ಹಂತದ ಬಿಹಾರ ವಿಧಾನಸಭಾ ಚುನಾವಣೆ; ನಾಮಪತ್ರ ಸಲ್ಲಿಸಲು ಇಂದು ಕೊನೆಯ ದಿನ

೩. ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ನೇತೃತ್ವದಲ್ಲಿ ಕೃಷಿ ವಿಜ್ಞಾನ ಕೇಂದ್ರ ಸಬಲೀಕರಣ ಕಾರ್ಯತಂತ್ರಗಳ ಕುರಿತ ಉನ್ನತ ಮಟ್ಟದ ಸಭೆ

೪. ಐದನೇ ಆವೃತ್ತಿಯ ಖೇಲೋ ಇಂಡಿಯಾ ವಿಶ್ವವಿದ್ಯಾಲಯ ಕ್ರೀಡಾಕೂಟ; ನವೆಂಬರ್ ೨೪ ರಿಂದ ರಾಜಸ್ಥಾನದ ೭ ನಗರಗಳಲ್ಲಿ ಆಯೋಜನೆ

><><><><

ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದು ನವದೆಹಲಿಯಲ್ಲಿ ನಡೆಯಲಿರುವ ಆದಿ ಕರ್ಮಯೋಗಿ ಅಭಿಯಾನ ಕುರಿತ ರಾಷ್ಟ್ರೀಯ ಸಮಾವೇಶದಲ್ಲಿ ಭಾಗವಹಿಸಲಿದ್ದಾರೆ.

ವಿಕಸಿತ ಭಾರತ ದೃಷ್ಟಿಕೋನದಡಿಯಲ್ಲಿ ಬುಡಕಟ್ಟು ವ್ಯವಹಾರಗಳ ಸಚಿವಾಲಯ ಈ ಸಮಾವೇಶವನ್ನು ಆಯೋಜಿಸುತ್ತಿದೆ.

ಪಿಎಂ ಜನ್‌ಮನ್ ಮತ್ತು ಧರ್ತಿ ಆಬಾ ಅಭಿಯಾನದ ಜೊತೆಯಲ್ಲಿ ಈ ಸಮಾವೇಶವನ್ನು ನಡೆಸಲಾಗುತ್ತಿದೆ. ಕೇಂದ್ರ ಬುಡಕಟ್ಟು ವ್ಯವಹಾರಗಳ ಸಚಿವ ಜುವಲ್ ಓರಾಮ್, ಬುಡಕಟ್ಟು ವ್ಯವಹಾರಗಳ ರಾಜ್ಯ ಸಚಿವರು, ಕೇಂದ್ರ ಮತ್ತು ರಾಜ್ಯ ಕಾರ್ಯದರ್ಶಿಗಳು, ಜಿಲ್ಲಾ ಮ್ಯಾಜಿಸ್ಟ್ರೇಟ್‌ಗಳು, ಮಾಸ್ಟರ್ ತರಬೇತುದಾರರು ಮತ್ತು ದೇಶಾದ್ಯಂತದ ಆದಿ ಸಹಯೋಗಿ ಪ್ರತಿನಿಧಿ ಗಳು ಸಹ ಈ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಬುಡಕಟ್ಟು ಗ್ರಾಮ ದೃಷ್ಟಿಕೋನ ೨೦೩೦; ವಿಚಾರಗಳಿಂದ ಅನುಷ್ಠಾನದವರೆಗೆ ಎಂಬ ವಿಷಯದ ಮೇಲೆ ಈ ಸಮಾವೇಶ ಕೇಂದ್ರೀಕರಿಸಿದೆ. ಸಮಾವೇಶದ ಸಮಯದಲ್ಲಿ, ಐದು ವಿಷಯಾಧಾರಿತ ಗುಂಪುಗಳು ಶಿಕ್ಷಣ ಮತ್ತು ಕೌಶಲ್ಯ ಅಭಿವೃದ್ಧಿ, ಆರೋಗ್ಯ ಮತ್ತು ಪೋಷಣೆ, ಜೀವನೋಪಾಯ ಮತ್ತು ಉದ್ಯಮಶೀಲತೆ, ಮೂಲಸೌಕರ್ಯ ಮತ್ತು ಆಡಳಿತ ಹಾಗೂ ಸಾಂಸ್ಥಿಕ ಬಲವರ್ಧನೆ ಸೇರಿದಂತೆ ಆದ್ಯತಾ ಕ್ಷೇತ್ರಗಳ ಕುರಿತು ಚರ್ಚಿಸಲಿವೆ.

><><><><

ಮೊದಲ ಹಂತದ ಬಿಹಾರ ವಿಧಾನಸಭಾ ಚುನಾವಣೆಯ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಇಂದು ಕೊನೆಗೊಳ್ಳಲಿದೆ. ಒಟ್ಟು ೨೪೩ ಸ್ಥಾನಗಳ ಪೈಕಿ ೧೨೧ ಕ್ಷೇತ್ರಗಳಿಗೆ ನವೆಂಬರ್ ೬ ರಂದು ಈ ಹಂತದಲ್ಲಿ ಚುನಾವಣೆ ನಡೆಯಲಿದೆ. ಮೊದಲ ಹಂತದಲ್ಲಿ ಪಾಟ್ನಾ, ದರ್ಭಂಗಾ, ಮುಜಫರ್‌ಪುರ, ಗೋಪಾಲ್‌ಗಂಜ್ ಮತ್ತು ಭೋಜ್‌ಪುರ ಜಿಲ್ಲೆಗಳು ಸೇರಿವೆ. ನಾಮಪತ್ರಗಳ ಪರಿಶೀಲನೆ ನಾಳೆ ನಡೆಯಲಿದ್ದು, ಉಮೇದುವಾರಿಕೆ ಹಿಂಪಡೆಯಲು ಅಕ್ಟೋಬರ್ ೨೦ ಕೊನೆಯ ದಿನವಾಗಿದೆ.

ಎರಡನೇ ಹಂತದ ಮತದಾನ ನವೆಂಬರ್ ೧೧ ರಂದು ನಡೆಯಲಿದ್ದು, ಮತ ಎಣಿಕೆ ನವೆಂಬರ್ ೧೪ ರಂದು ನಡೆಯಲಿದೆ.

><><><><

ದೇಶಾದ್ಯಂತ ಕೃಷಿ ವಿಜ್ಞಾನ ಕೇಂದ್ರ - ಕೆವಿಕೆಗಳನ್ನು ಹೆಚ್ಚು ಪರಿಣಾಮಕಾರಿ ಮತ್ತು ಸಬಲೀಕರಣಗೊಳಿಸುವ ಕಾರ್ಯತಂತ್ರಗಳ ಕುರಿತು ಚರ್ಚಿಸಲು ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಉನ್ನತ ಮಟ್ಟದ ಸಭೆ ನಡೆಸಿದರು. ನವದೆಹಲಿಯಲ್ಲಿ ನಡೆದ ಸಭೆಯಲ್ಲಿ, ದೇಶದಲ್ಲಿ ಪ್ರಸ್ತುತ ೭೩೧ ಕೆವಿಕೆಗಳಿವೆ ಮತ್ತು ಅವುಗಳ ಜಾಲವನ್ನು ವಿಸ್ತರಿಸುವುದರ ಜೊತೆಗೆ, ಸಣ್ಣ ರೈತರ ಅನುಕೂಲಕ್ಕಾಗಿ ಅವುಗಳನ್ನು ಬಲಪಡಿಸುವುದು ಅತ್ಯಗತ್ಯ ಎಂದು ಸಚಿವರು ಒತ್ತಿ ಹೇಳಿದರು. ಕೆವಿಕೆಗಳು ರೈತರನ್ನು ತಲುಪಲು ಪ್ರಾಥಮಿಕ ಮಾಧ್ಯಮವಾಗಿ ಕಾರ್ಯನಿರ್ವಹಿಸುತ್ತವೆ, ತಂತ್ರಜ್ಞಾನ ಪ್ರಸರಣ, ತರಬೇತಿ ಮತ್ತು ಕೃಷಿ ನಾವೀನ್ಯತೆಗಳನ್ನು ತಲುಪಿಸುವಲ್ಲಿ ನಿರ್ಣಾಯಕ ಪಾತ್ರ ವಹಿಸುತ್ತವೆ ಎಂದು ಅವರು ಒತ್ತಿ ಹೇಳಿದರು. ಸಮಗ್ರ ಕೃಷಿ ಮತ್ತು ನೈಸರ್ಗಿಕ ಕೃಷಿಯನ್ನು ಉತ್ತೇಜಿಸುವ ಮೂಲಕ ಮಾದರಿ ಉಪಕ್ರಮಗಳನ್ನು ಅಭಿವೃದ್ಧಿಪಡಿಸಲು ಸಚಿವರು ಕೆವಿಕೆಗಳಿಗೆ ನಿರ್ದೇಶನ ನೀಡಿದರು.

><><><><

ಅಫ್ಘಾನಿಸ್ತಾನ ಮತ್ತು ಪಾಕಿಸ್ತಾನ ನಡುವಿನ ಪರಿಸ್ಥಿತಿಯನ್ನು ಭಾರತ ಸೂಕ್ಷ್ಮವಾಗಿ ಗಮನಿಸುತ್ತಿದೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ನವದೆಹಲಿಯಲ್ಲಿ ನಿನ್ನೆ ಮಾಧ್ಯಮಗಳಿಗೆ ಮಾಹಿತಿ ನೀಡಿದ ವಿದೇಶಾಂಗ ವಕ್ತಾರ ರಣಧೀರ್ ಜೈಸ್ವಾಲ್, ಪಾಕಿಸ್ತಾನ ಭಯೋತ್ಪಾದಕ ಸಂಘಟನೆಗಳಿಗೆ ಆಶ್ರಯ ನೀಡುತ್ತಿದ್ದು, ಭಯೋತ್ಪಾದಕ ಚಟುವಟಿಕೆಗಳನ್ನು ಪ್ರಾಯೋಜಿಸುತ್ತಿದೆ ಎಂಬುದು

ಸ್ಪಷ್ಟವಾಗಿದೆ. ತನ್ನ ಆಂತರಿಕ ವೈಫಲ್ಯಗಳಿಗೆ ನೆರೆಹೊರೆಯವರನ್ನು ದೂಷಿಸುವುದು ಪಾಕಿಸ್ತಾನದ ಹಳೆಯ ಅಭ್ಯಾಸವಾಗಿದೆ. ಭಾರತ, ಅಫ್ಘಾನಿಸ್ತಾನದ ಸಾರ್ವಭೌಮತ್ವ, ಪ್ರಾದೇಶಿಕ ಸಮಗ್ರತೆ ಮತ್ತು ಸ್ವಾತಂತ್ರಕ್ಕೆ ಸಂಪೂರ್ಣವಾಗಿ ಬದ್ಧವಾಗಿದೆ ಎಂದು ತಿಳಿಸಿದ್ದಾರೆ. ಕಾಬೂಲ್‌ನಲ್ಲಿರುವ ಭಾರತೀಯ ಮಿಷನ್ ಮೇಲ್ದರ್ಜೆಗೇರಿಸುವ ಕುರಿತು ಮಾತನಾಡಿದ ಜೈಸ್ವಾಲ್, ಭಾರತದ ತಾಂತ್ರಿಕ ಮಿಷನ್ ಜೂನ್ ೨೦೨೨ ರಿಂದ ಕಾಬೂಲ್‌ನಲ್ಲಿ ಕಾರ್ಯನಿರ್ವಹಿಸುತ್ತಿದೆ ಎಂದು ಹೇಳಿದರು. ಮುಂದಿನ ಕೆಲವು ದಿನಗಳಲ್ಲಿ ಅದನ್ನು ರಾಯಭಾರ ಕಚೇರಿಯಾಗಿ ಪರಿವರ್ತಿಸಲಾಗುವುದು ಎಂದು ಅವರು ಮಾಹಿತಿ ನೀಡಿದರು. ನಯಾರಾ ಮೇಲೆ ಬ್ರಿಟನ್ ಘೋಷಿಸಿದ ಇತ್ತೀಚಿನ ನಿರ್ಬಂಧಗಳ ಕುರಿತ ಪ್ರಶ್ನೆಗೆ ಉತ್ತರಿಸಿದ ಅವರು, ತನ್ನ ನಾಗರಿಕರ ಮೂಲಭೂತ ಅಗತ್ಯಗಳನ್ನು ಪೂರೈಸಲು ಇಂಧನ ಭದ್ರತೆಯನ್ನು ಒದಗಿಸುವುದನ್ನು ಅತ್ಯಂತ ಮಹತ್ವದ ಜವಾಬ್ದಾರಿ ಎಂದು ಭಾರತ ಪರಿಗಣಿಸುತ್ತದೆ. ಇಂಧನ ವ್ಯಾಪಾರಕ್ಕೆ ಸಂಬಂಧಿಸಿದಂತೆ ಯಾವುದೇ ದ್ವಿಮುಖ ಮಾನದಂಡಗಳು ಇರಬಾರದು ಎಂದು ಅವರು ಒತ್ತಿ ಹೇಳಿದರು.

><><><><><

ಜಿ-೨೦ ರಾಷ್ಟ್ರಗಳು ಧ್ಯೇಯ ಮತ್ತು ಅನುಷ್ಠಾನದ ನಡುವೆ ಸೇತುವೆಯಾಗಿ ಕಾರ್ಯನಿರ್ವಹಿಸಬೇಕು ಮತ್ತು ಪ್ರತಿಯೊಂದು ರಾಷ್ಟ್ರದ ಕೊಡುಗೆಯನ್ನು ಗೌರವಿಸುವ ಜೊತೆಗೆ ಸಾಮರ್ಥ್ಯವನ್ನು ಹೆಚ್ಚಿಸಬೇಕು ಎಂದು ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವ ಭೂಪೇಂದರ್ ಯಾದವ್ ಹೇಳಿದ್ದಾರೆ. ದಕ್ಷಿಣ ಆಫ್ರಿಕಾದಲ್ಲಿ ನಿನ್ನೆ ನಡೆದ ಜಿ೨೦ ಹವಾಮಾನ ಮತ್ತು ಪರಿಸರ ಸುಸ್ಥಿರತೆ ಕಾರ್ಯಪಡೆಯ ಸಚಿವರ ಸಭೆಯ ಉದ್ಘಾಟನಾ ಸಮಾರಂಭವನ್ನುದ್ದೇಶಿಸಿ ಮಾತನಾಡಿದ ಅವರು, ಸಮಾನತೆ ಮತ್ತು ಸಾಮಾನ್ಯ ಆದರೆ ವಿಭಿನ್ನ ಜವಾಬ್ದಾರಿಗಳನ್ನು

ಎತ್ತಿಹಿಡಿಯುವಾಗ ಭಾರತ ಹವಾಮಾನ ಮತ್ತು ಅಭಿವೃದ್ಧಿಯನ್ನು ಸಂಯೋಜಿಸುವುದನ್ನು ಬೆಂಬಲಿಸುತ್ತದೆ ಎಂದು ಹೇಳಿದರು.

><><><><

ಮುಖ್ಯಮಂತ್ರಿ ಭೂಪೇಂದ್ರ ಪಟೇಲ್ ನೇತೃತ್ವದ ಗುಜರಾತ್ ಸಚಿವ ಸಂಪುಟ ಇಂದು ವಿಸ್ತರಣೆಯಾಗಲಿದೆ. ಮುಖ್ಯಮಂತ್ರಿ ಭೂಪೇಂದ್ರ ಪಟೇಲ್ ಅವರ ಸಂಪುಟದಲ್ಲಿ ಹೊಸದಾಗಿ ನೇಮಕಗೊಂಡ ಸಚಿವರು ಪ್ರಮಾಣ ವಚನ ಸ್ವೀಕರಿಸಲಿದ್ದಾರೆ. ರಾಜ್ಯಪಾಲ ಆಚಾರ್ಯ ದೇವವ್ರತ್ ಅವರ ಸಮ್ಮುಖದಲ್ಲಿ ಗಾಂಧಿನಗರದ ಮಹಾತ್ಮ ಮಂದಿರದಲ್ಲಿ ಪ್ರಮಾಣ ವಚನ ಸ್ವೀಕಾರ ಸಮಾರಂಭ ನಡೆಯಲಿದೆ. ರಾಜ್ಯ ಸಚಿವ ಸಂಪುಟಕ್ಕೆ ಸೇರ್ಪಡೆಗೊಂಡ ಸಚಿವರಿಗೆ ರಾಜ್ಯಪಾಲರು ಅಧಿಕಾರ ಮತ್ತು ಗೌಪ್ಯತೆಯ ಪ್ರಮಾಣ ವಚನ ಬೋಧಿಸಲಿದ್ದಾರೆ. ಈ ನಡುವೆ ಗುಜರಾತಿನಲ್ಲಿ ನಡೆದ ಪ್ರಮುಖ ಬೆಳವಣಿಗೆಯಲ್ಲಿ, ಮುಖ್ಯಮಂತ್ರಿ ಭೂಪೇಂದ್ರ ಪಟೇಲ್ ಹೊರತುಪಡಿಸಿ, ಇಡೀ ರಾಜ್ಯ ಸಚಿವ ಸಂಪುಟ ಇಂದು ನಡೆಯಲಿರುವ ಸಂಪುಟ ಪುನರ್ ರಚನೆಗೆ ಮುಂಚಿತವಾಗಿ ನಿನ್ನೆ ರಾಜಿನಾಮೆ ನೀಡಿದೆ ಎಂದು ವರದಿಯಾಗಿದೆ.

><><><><

ಎಲ್ಲಾ ಆಹಾರ ವ್ಯವಹಾರ ನಿರ್ವಾಹಕರು ಆಹಾರ ಉತ್ಪನ್ನಗಳಿಂದ ಒಆರ್‌ಎಸ್ ಪದವನ್ನು ತೆಗೆದುಹಾಕುವುದನ್ನು ಖಚಿತಪಡಿಸಿಕೊಳ್ಳಲು ಭಾರತೀಯ ಆಹಾರ ಸುರಕ್ಷತೆ ಮತ್ತು ಮಾನದಂಡಗಳ ಪ್ರಾಧಿಕಾರ ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಗೆ ನಿರ್ದೇಶನ ನೀಡಿದೆ.

ಆಹಾರ ಸುರಕ್ಷತೆ ಮತ್ತು ಮಾನದಂಡಗಳ ಕಾಯ್ದೆ, ೨೦೦೬ರ ಅಡಿಯಲ್ಲಿ ಸೂಚಿಸಲಾದ ಲೇಬಲಿಂಗ್ ಮತ್ತು ಜಾಹೀರಾತು ಅವಶ್ಯಕತೆಗಳನ್ನು ಕಟ್ಟುನಿಟ್ಟಾಗಿ ಪಾಲಿಸುವುದನ್ನು ಖಚಿತಪಡಿಸಿಕೊಳ್ಳುವಂತೆ ಎಫ್ಎಸ್ಎಸ್ಎಐ ಎಲ್ಲಾ ಸಂಬಂಧಿತ ಅಧಿಕಾರಿಗಳಿಗೆ ಸೂಚಿಸಿದೆ.

><><><><

ಐದನೇ ಆವೃತ್ತಿಯ ಖೇಲೋ ಇಂಡಿಯಾ ವಿಶ್ವವಿದ್ಯಾಲಯ ಕ್ರೀಡಾಕೂಟ - ಕೆಐಯುಜಿ ನವೆಂಬರ್ ೨೪ ರಿಂದ ರಾಜಸ್ಥಾನದ ೭ ನಗರಗಳಲ್ಲಿ ನಡೆಯಲಿದೆ. ಜೈಪುರ, ಅಜ್ಮೀರ್, ಉದಯಪುರ, ಜೋಧ್‌ಪುರ, ಬಿಕಾನೇರ್, ಕೋಟಾ ಮತ್ತು ಭರತ್‌ಪುರ ಆತಿಥೇಯ ನಗರಗಳಾಗಿವೆ. ೧೨ ದಿನಗಳ ಈ ಕ್ರೀಡಾಕೂಟದಲ್ಲಿ ೨೩ ಪದಕ ಕ್ರೀಡೆಗಳು ಮತ್ತು ಒಂದು ಪ್ರದರ್ಶನ ಕ್ರೀಡೆ - ಖೋ-ಖೋ, ದೇಶಾದ್ಯಂತದ ೫ ಸಾವಿರಕ್ಕೂ ಹೆಚ್ಚು ವಿಶ್ವವಿದ್ಯಾಲಯದ ಕ್ರೀಡಾಪಟುಗಳನ್ನು ಒಟ್ಟುಗೂಡಿಸಲಾಗುತ್ತದೆ. ಈ ಕಾರ್ಯಕ್ರಮವನ್ನು ಘೋಷಿಸಿದ ಕೇಂದ್ರ ಯುವ ವ್ಯವಹಾರ ಮತ್ತು ಕ್ರೀಡಾ ಸಚಿವ ಮನ್ಸುಖ್ ಮಾಂಡವಿಯಾ, ಐದನೇ ಆವೃತ್ತಿಯು ಭಾರತದ ವಿಸ್ತರಿಸುತ್ತಿರುವ ಕ್ರೀಡಾ ಭೂದೃಶ್ಯವನ್ನು ಪ್ರತಿಬಿಂಬಿಸುತ್ತದೆ ಮತ್ತು ಜಾಗತಿಕವಾಗಿ ರಾಷ್ಟ್ರವನ್ನು ಪ್ರತಿನಿಧಿಸಲು ಆಶಿಸುವ ಅನೇಕರಿಗೆ ಪ್ರಮುಖ ಅನುಭವವನ್ನು ಒದಗಿಸುತ್ತದೆ ಎಂದು ಹೇಳಿದರು. ಖೇಲೋ ಇಂಡಿಯಾ ಉಪಕ್ರಮ, ಭಾಗವಹಿಸುವಿಕೆ, ಪ್ರತಿಭಾ ಪೋಷಣೆ ಮತ್ತು ಶ್ರೇಷ್ಠತೆಯನ್ನು ಬೆಳೆಸುವ ಬಲವಾದ ಪರಿಸರ ವ್ಯವಸ್ಥೆಯನ್ನು ನಿರ್ಮಿಸಿದೆ. ರಾಜಸ್ಥಾನದಲ್ಲಿ ನಡೆಯುವ ವಿಶ್ವವಿದ್ಯಾಲಯ ಕ್ರೀಡಾಕೂಟವು ಸಾವಿರಾರು ವಿದ್ಯಾರ್ಥಿಗಳು ಶಿಕ್ಷಣದ ಜೊತೆಗೆ ಕ್ರೀಡೆಗಳನ್ನು ಮುಂದುವರಿಸಲು ಮತ್ತು ಸ್ಪರ್ಧೆ ಮತ್ತು ಸೌಹಾರ್ದತೆಯ ಮೂಲಕ 'ಏಕ್ ಭಾರತ್ ಶ್ರೇಷ್ಠ ಭಾರತ್' ನ ಮನೋಭಾವವನ್ನು ಬಲಪಡಿಸಲು ಪ್ರೇರೇಪಿಸುತ್ತದೆ ಎಂದು ಡಾ. ಮಾಂಡವಿಯಾ ಹೇಳಿದರು.

**ಗಮನಾರ್ಹವಾಗಿ, ಈ ಬಾರಿ ಬೀಚ್ ವಾಲಿಬಾಲ್, ಕ್ಯಾನೋಯಿಂಗ್ ಮತ್ತು ಕಯಾಕಿಂಗ್ ಹಾಗೂ ಸೈಕ್ಲಿಂಗ್ ಅನ್ನು ಮೊದಲ ಬಾರಿಗೆ ಕೆಐಯುಜಿ ಕ್ರೀಡಾಕೂಟದಲ್ಲಿ ಪರಿಚಯಿಸಲಾಗುತ್ತಿದೆ.**

**><><>END<><><**